ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ-563 103

---

ಸಂಖ್ಯೆ : ಬೆಂಉ.ವಿ/ಬಿ.ಇಡಿ/ಸಂಯೋಜನೆ/ 2410 / 2020-21 ದಿನಾಂಕ: 25.03.2021

**ಅಧಿ ಸೂಚನೆ**

**ವಿಷಯ:** 2020-21ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ.ವೆಂಕಟಪತೆಪ್ಪ ಶಿಕ್ಷಣ ಕಾಲೇಜು ಸಂಯೋಜನೆ ನವೀಕರಿಸುವ ಬಗ್ಗೆ.

**ಉಲ್ಲೇಖ:** 1. ಇಡಿ 90 ಯುಬಿವಿ 2018, ದಿನಾಂಕ: 20.08.2018.

3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 24.03.2021.

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2020-21ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ. ವೆಂಕಟಪತೆಪ್ಪ ಶಿಕ್ಷಣ ಕಾಲೇಜು ಸಿ.ವಿ.ವಿ ಕ್ಯಾಂಪಸ್ ಚಿಕ್ಕಬಳ್ಳಾಪುರ 562101 ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಶಾಶ್ವತ ಸಂಯೋಜನೆಯನ್ನು 2019-20ನೇ ಶೈಕ್ಷಣಿಕ ವರ್ಷಕ್ಕೆ ಮಂಜೂರು ಮಾಡಲಾಗಿದ್ದು, 2020-21ನೇ ಸಾಲಿಗೆ ಶಾಶ್ವತ ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸ್ | ವಿದ್ಯಾರ್ಥಿ ಪ್ರಮಾಣ |
|---|---|---|---|
| **01** | **ವಿಶ್ವವಿದ್ಯಾಲಯದ ಪರಿನಿಯಮಾವಳಿಗಂತೆ** | ಬಿ.ಇಡಿ | **100** |

ವಿ.ಸೂ: ವಿ.ಸೂ: (2017-18 ರಿಂದ 2021-22 ವರ್ಷದ ವರೆಗೂ ಶಾಶ್ವತ ಸಂಯೋಜನೆಯನೆ ಹೊಂದಿರುತ್ತದೆ.)

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರುತ್ತಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು, ಕಾಲೇಜು ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ(ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
7. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13-08-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಭೋಧಕ/ಭೋಧಕೇತರ/ ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ /ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯಾದ [illegible] ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ

Office of the Registrar

ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟಕ್ಕೆ ಕಾಲೇಜು ಕೋರ್ಸುಗಳು ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
9. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ